# ಕರ್ನಾಟಕ ಸರ್ಕಾರ

ಸಂ:ಆಇ 02 ಟಿಎಫ್‌ಪಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ
ಬೆಂಗಳೂರು, ದಿನಾಂಕ:16.05.2020.

## ಸುತ್ತೋಲೆ

**ವಿಷಯ**:-ಮುಂದುವರೆದ ಹಾಗೂ ಹೊಸ ಯೋಜನೆಗಳಿಗೆ ಸಂಬಂಧಿಸಿದಂತೆ ಆದೇಶ ಹೊರಡಿಸುವ ಬಗ್ಗೆ.

****-****

ಸರ್ಕಾರದ ಸುತ್ತೋಲೆ ಸಂ:ಆಇ 02 ಟಿಎಫ್‌ಪಿ 2020, ದಿ;30.04.2020 ರ ಸುತ್ತೋಲೆಯ ಕ್ರಮ ಸಂ:4 ರಲ್ಲಿ ಯಾವುದೇ ಕಾಮಗಾರಿ ಈಗಾಗಲೇ ಅನುಮೋದನೆಗೊಂಡು, ಟೆಂಡರ್ ಆಗಿ Work Order ನೀಡಿದ್ದು, ಆದರೆ ಕಾಮಗಾರಿ ಪ್ರಾರಂಭವಾಗದೇ ಇದ್ದಲ್ಲಿ, ಇವುಗಳನ್ನು ಪ್ರಾರಂಭಿಸಲು ಆರ್ಥಿಕ ಇಲಾಖೆಯ ಪೂರ್ವಾನುಮೋದನೆ ಪಡೆಯತಕ್ಕದ್ದು ಎಂದು ತಿಳಿಸಲಾಗಿತ್ತು. ಆದರೆ, ಕೆಲವು ಇಲಾಖೆಗಳಿಂದ ಈಗಾಗಲೇ ಪ್ರಾರಂಭಗೊಂಡಿರುವ, Covid-19 ನಿಂದ ಸ್ಥಗಿತಗೊಂಡಿರುವ ಕಾಮಗಾರಿಗಳಿಗೆ ಇದು ಅನ್ವಯವಾಗುವ ಬಗ್ಗೆ ಆರ್ಥಿಕ ಇಲಾಖೆಯಿಂದ ಸ್ಪಷ್ಟೀಕರಣ ಕೇಳಲಾಗಿದೆ. ಇದಕ್ಕೆ ಆರ್ಥಿಕ ಇಲಾಖೆಯಿಂದ ಸ್ಪಷ್ಟೀಕರಣ ಈ ಕೆಳಕಂಡಂತಿದೆ.

**"ಈಗಾಗಲೇ ಕಾಮಗಾರಿಯು ಭೌತಿಕವಾಗಿ ಕಾರ್ಯಾರಂಭಗೊಂಡಿದ್ದು, Covid-19 ನಿಂದ ಕಾಮಗಾರಿಯು ಸ್ಥಗಿತಗೊಂಡಿದ್ದಲ್ಲಿ ಅಂತಹ ಎಲ್ಲಾ ಕಾಮಗಾರಿಗಳನ್ನು ಮುಂದುವರೆಸಬಹುದಾಗಿದೆ ಎಂದು ತಿಳಿಸಲಾಗಿದೆ".**

16/5/2020
**(ಹೆಚ್.ಎ. ಶೋಭ)**
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆನಿ ಮತ್ತು ಬಿಸಿಸಿ).

ಪ್ರತಿಗಳು:-

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು.